# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1592
ಸದಸ್ಯರ ಹೆಸರು : ಶ್ರೀ ಶಶೀಲ್ ನಮೋಶಿ
ಉತ್ತರಿಸುವ ದಿನಾಂಕ : 11-03-2022
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೆ.ಆರ್.ಇ.ಐ.ಎಸ್ ನೌಕರರಿಗೆ ಕಳೆದ 10 ವರ್ಷಗಳಿಂದ ಪಾರದರ್ಶಕ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಮಾಡದಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; | ಸಂಘದ ವಸತಿ ಶಾಲೆಗಳಿಗೆ 2011 ಹಾಗೂ ತದನಂತರ ಹಂತ ಹಂತವಾಗಿ ಖಾಯಂ ಸಿಬ್ಬಂದಿಗಳ ನೇಮಕಾತಿ ಮಾಡಿದ್ದು, ವರ್ಗಾವಣೆ ಪ್ರಕ್ರಿಯೆಯನ್ನು 2018-19 ನೇ ಸಾಲಿನ ವರೆಗೆ ಕೌನ್ಸಿಲಿಂಗ್ ಮುಖಾಂತರ ವರ್ಗಾವಣೆ ಮಾಡಿರುವುದಿಲ್ಲ.<br><br>2019-20ನೇ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ ಸಕಇ 19 ಮೊದೇಶಾ 2019, ದಿನಾಂಕ: 06.07.2019 ರ ವರ್ಗಾವಣೆ ಮಾರ್ಗಸೂಚಿಯನ್ವಯ ಸಂಘದ ವಸತಿ ಶಾಲೆಗಳ ಸಿಬ್ಬಂದಿಗಳಿಗೆ ಕೌನ್ಸಿಲಿಂಗ್ ಮುಖಾಂತರ ವರ್ಗಾವಣೆ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿರುತ್ತದೆ.<br><br>2020-21 ಹಾಗೂ 2021-22ನೇ ಸಾಲುಗಳಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗ ಹರಡುವಿಕೆ ಹಿನ್ನೆಲೆಯಲ್ಲಿ ಸಂಘದ ವತಿಯಿಂದ ಕೌನ್ಸಿಲಿಂಗ್ ಮುಖಾಂತರ ವರ್ಗಾವಣೆ ಪ್ರಕ್ರಿಯೆಯನ್ನು ಕೈಗೊಳ್ಳಲು ಸಾಧ್ಯವಾಗಿರುವುದಿಲ್ಲ.<br><br>ಪ್ರಸಕ್ತ ಸಾಲಿನಲ್ಲಿ ವರ್ಗಾವಣೆ ಮಾರ್ಗಸೂಚಿಯನ್ನು ಸಿದ್ದಪಡಿಸಲು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಕರಡು ವರ್ಗಾವಣೆ ಮಾರ್ಗಸೂಚಿಯನ್ನು ಸಿದ್ದಪಡಿಸಲಾಗಿದ್ದು, ಸಂಬಂಧಿಸಿದಂತೆ ಸಂಘದ ಖಾಯಂ ಬೋಧಕ/ ಬೋಧಕೇತರ ಸಿಬ್ಬಂದಿ ಪ್ರತಿನಿಧಿಗಳ ಸಭೆಯನ್ನು ಕರೆದು ಚರ್ಚಿಸಿ, ಅಂತಿಮಗೊಳಿಸಿ, ಮಾದರಿ ವರ್ಗಾವಣೆ ಮಾರ್ಗಸೂಚಿಯನ್ನು ಸಮಿತಿಯ ಮುಂದೆ ಮಂಡಿಸಿ, ಸಮಿತಿಯ ನಿರ್ಣಯದಂತೆ ಕ್ರಮವಹಿಸಲಾಗುವುದು. |
| ಆ) | ಬಂದಿದ್ದಲ್ಲಿ, ಕಾರಣಗಳೇನು; ಪ್ರಸ್ತುತ ವರ್ಷವಾದರೂ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಮಾಡಲಾಗುವುದೆಯೇ; | |
| ಇ) | ನಿರ್ದಿಷ್ಟ ಕಾಲಮಿತಿಯಲ್ಲಿ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಮಾಡಲಾಗುವುದೇ; (ವಿವರವಾದ ಮಾಹಿತಿ ನೀಡುವುದು) | |

ಸಕಇ 151 ಮೊದೇಶಾ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು